ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ ( ಭರವಸೆಗಳ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ    ದಿನಾಂಕ : DATE : 16/06/2019

# ಭರವಸೆ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಎಟಿಆರ್ ರಾಜೀನಾಮೆ

16-6-19

ಸಂ.ಕ. ಸಮಾಚಾರ ಬೆಂಗಳೂರು:

ವಿಧಾನಮಂಡಲ ಅಧಿವೇಶನದ ಸಂದರ್ಭದಲ್ಲಿ ಸರ್ಕಾರ ನೀಡಿದ್ದ ಭರವಸೆಗಳನ್ನು ಈಡೇರಿಸುವಲ್ಲಿ ವಿಫಲವಾಗಿರುವುದರಿಂದ ಅಸಮಾಧಾನಗೊಂಡ ವಿಧಾನಸಭೆ ಭರವಸೆಗಳ ಸಮಿತಿ ಅಧ್ಯಕ್ಷ ಸ್ಥಾನಕ್ಕೆ ಶಾಸಕ ಎ.ಟಿ. ರಾಮಸ್ವಾಮಿ ರಾಜೀನಾಮೆ ನೀಡಿದ್ದಾರೆ.

ಶುಕ್ರವಾರ ಸಂಜೆ ಕೆಂಗೇರಿ ಹೋಬಳಿಯ ಬಿಎಂ ಕಾವಲ್‌ನಲ್ಲಿ ಸರ್ಕಾರದ ಜಾಗ ಕಬಳಿಕೆ ಮಾಡಿರುವ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ್ದ ಅವರು ಸಂಜೆ ವಾಪಸ್ ಬಂದಾಗ ವಿಧಾನಸಭಾಧ್ಯಕ್ಷರಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ಬಿ.ಎಂ. ಕಾವಲ್‌ಗೆ ಪರಿಶೀಲನೆಗೆ ತೆರಳುವ ಮುನ್ನ ನಡೆದ ಸಮಿತಿ ಸಭೆಯಲ್ಲಿ ಬಿ. ಎಂ ಕಾವಲ್ ಪ್ರಕರಣ ಚರ್ಚೆಯ ವಿಷಯವಾಗಿತ್ತು. ಪ್ರಕರಣದಲ್ಲಿ ಅಕ್ರಮ ನಡೆದಿರುವುದು ಸತ್ಯವಾದರೂ ಅಧಿಕಾರಿಗಳು ಹಾಗೂ ಆರೋಪಿತರ ವಿರುದ್ಧ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಬೇಸರಗೊಂಡು ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿರುವುದಾಗಿ ಸುದ್ದಿ ಸಂಸ್ಥೆಗೆ ಎ.ಟಿ. ರಾಮಸ್ವಾಮಿ ತಿಳಿಸಿದ್ದಾರೆ.

ರಾಜೀನಾಮೆ ಪತ್ರದಲ್ಲಿ ಅವರು ಕೆಲ ಮಹತ್ವದ ವಿಷಯಗಳನ್ನು ಪ್ರಸ್ತಾಪಿಸಿದ್ದು, 2018ರ ಡಿಸೆಂಬರ್ 13ರಂದು ಬಿ.ಎಂ. ಕಾವಲ್ ಪ್ರದೇಶದ 310 ಎಕರೆ 18 ಗುಂಟೆ ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಿರುವ ಕುರಿತು ಪ್ರಸ್ತಾಪಿಸಿದ್ದೆ. ಇದಕ್ಕೆ ಪ್ರತಿಕ್ರಿಯಿಸಿದ ಕಂದಾಯ ಸಚಿವರು, ಈ ಸಂಬಂಧ ಜಿಲ್ಲಾ ಧಿಕಾರಿಗಳು ಮಾಡಿರುವ ಆದೇಶ ಕಾನೂನುಬಾಹಿರ ಎಂದು ಒಪ್ಪಿಕೊಂಡಿದ್ದರು. ಆಗ ನೀವು, ಅವರನ್ನು ಅಮಾನತ್ತಿನಲ್ಲಿಡುವಂತೆ ಸಚಿವರಿಗೆ ಸೂಚಿಸಿದ್ದೀರಿ. ಅದಕ್ಕೆ ಕಂದಾಯ ಸಚಿವರು ಒಪ್ಪಿಗೆ ಸೂಚಿಸಿದ್ದರು. ಆದರೆ, ಇಲ್ಲಿಯವರೆಗೂ ಜಿಲ್ಲಾಧಿಕಾರಿ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ಸರ್ಕಾರಿ ಜಮೀನು ತೆರವಿಗೆ ಕೂಡ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ವಿಧಾನಮಂಡಲದಲ್ಲಿ ನೀಡಿದ ಭರವಸೆಗೆ ಕೂಡ ಯಾವುದೇ ಬೆಲೆ ಇಲ್ಲದಿರುವುದು ನನಗೆ ಬೇಸರ ತಂದಿದೆ.



ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷರಿಗೆ ನೀಡಿದ ಭರವಸೆಗಳೇ ಈಡೇರಿಲ್ಲ ಎಂಬುದು ವಿಷಾದನೀಯ. ತಮ್ಮ ಶಿಫಾರಸಿಗೆ ಬೆಲೆ ಇಲ್ಲ ಎಂದ ಮೇಲೆ ಆ ಹುದ್ದೆಯಲ್ಲಿ ಮುಂದುವರೆಯುವುದರಲ್ಲಿ ಅರ್ಥವಿಲ್ಲ. ಈ ಹಿನ್ನೆಲೆಯಲ್ಲಿ ಮನನೊಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದೇವೆ ಎಂದು ಪತ್ರದಲ್ಲಿ ಸ್ಪಷ್ಟಪಡಿಸಿದ್ದಾರೆ.